## ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 487 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:11-12-2018

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬೆಂಗಳೂರು.

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು

ಮಾನ್ಯರೆ,

**ವಿಷಯ:** ಮಕ್ಕಳ ವಿಶೇಷ ಗ್ರಾಮಸಭೆಗಳನ್ನು ಆಯೋಜಿಸಿರುವ ಬಗ್ಗೆ ವರದಿ ಸಲ್ಲಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಸಮ ಸಂಖ್ಯೆಯ ಸುತ್ತೋಲೆಯ ದಿನಾಂಕ: 17-10-2018.
2. ನಿರ್ದೇಶಕರು, ಸಿಎಮ್‌ಸಿಎ ಸಂಸ್ಥೆ, ಬೆಂಗಳೂರು ರವರ ಪತ್ರದ ದಿನಾಂಕ: 22-11-2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿ ನವೆಂಬರ್ ಮಾಹೆಯಲ್ಲಿ ಕಡ್ಡಾಯವಾಗಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ಏರ್ಪಡಿಸಲು ಮತ್ತು ಗ್ರಾಮಸಭೆಗಳನ್ನು ಆಯೋಜಿಸಿದ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

ಉಲ್ಲೇಖ (2) ರಲ್ಲಿ ನಿರ್ದೇಶಕರು, ಸಿಎಮ್‌ಸಿಎ ಸಂಸ್ಥೆ ರವರು ಮಕ್ಕಳ ಗ್ರಾಮ ಸಭೆಗಳಲ್ಲಿ ಮಕ್ಕಳು ಎತ್ತಿದ ಸಮಸ್ಯೆಗಳನ್ನು ಕಾಲ ಮಿತಿಯೊಳಗೆ ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂದು ಕೋರಿರುತ್ತಾರೆ.

ಆದ್ದರಿಂದ ಮಕ್ಕಳ ಗ್ರಾಮ ಸಭೆಗಳಲ್ಲಿ ಮಕ್ಕಳು ತಮ್ಮ ಶಾಲೆಗಳ ಹಾಗೂ ಗ್ರಾಮದ ಸಮಸ್ಯೆಗಳ ಕುರಿತು ಚರ್ಚಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಮಕ್ಕಳು ಚರ್ಚಿಸಿರುವ ವಿಷಯಗಳನ್ನು ಗ್ರಾಮ ಪಂಚಾಯತಿಗಳು ಆದ್ಯತೆಯ ಮೇರೆಗೆ ಮುಂದಿನ ಮೂರು ತಿಂಗಳೊಳಗಾಗಿ ಬಗೆಹರಿಸಲು ಕ್ರಮ ವಹಿಸುವುದು ಮತ್ತು ಮಕ್ಕಳು ಚರ್ಚಿಸಿರುವ ಸಮಸ್ಯೆಗಳ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಶಾಲೆಗೆ ಭೇಟಿ ನೀಡಿ ಮಾಹಿತಿ ನೀಡುವುದು.

ಮಕ್ಕಳ ವಿಶೇಷ ಗ್ರಾಮಸಭೆಗಳನ್ನು ಆಯೋಜಿಸುವಲ್ಲಿ ಕೆಲವು ಗ್ರಾಮ ಪಂಚಾಯತಿಗಳು ನಿರ್ಲಕ್ಷ್ಯ ವಹಿಸಿರುವ ಬಗ್ಗೆ, ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿನ ಎಲ್ಲಾ ಶಾಲೆಗಳ ಮಕ್ಕಳನ್ನು ಆಹ್ವಾನಿಸದೇ ಇರುವ ಬಗ್ಗೆ, ಗ್ರಾಮ ಪಂಚಾಯತಿಯ ಇತರ ಕಾರ್ಯಕ್ರಮಗಳ ಜೊತೆಗೆ ಮಕ್ಕಳ ಗ್ರಾಮ ಸಭೆಗಳನ್ನು ವಿಲೀನಗೊಳಿಸಿ ಆಯೋಜಿಸಿರುವುದರ ಬಗ್ಗೆ ಮತ್ತು ನಿಗದಿತ ಸಮಯಕ್ಕೆ ಕಾರ್ಯಕ್ರಮ ಆರಂಭಿಸದೇ ವಿಳಂಬವಾಗಿ ಪ್ರಾರಂಭಿಸುವುದರ ಬಗ್ಗೆ ದೂರುಗಳು ಬಂದಿರುತ್ತವೆ. ಆದ್ದರಿಂದ ಇದುವರೆಗೂ ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ಆಯೋಜಿಸದೆ ಇರುವ ಗ್ರಾಮ ಪಂಚಾಯತಿಗಳು ಕೂಡಲೆ ಸುತ್ತೋಲೆಯನ್ವಯ ಪರಿಣಾಮಕಾರಿಯಾಗಿ ಮಕ್ಕಳ ಗ್ರಾಮಸಭೆಗಳನ್ನು ಏರ್ಪಡಿಸುವುದು. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಮಕ್ಕಳ ಗ್ರಾಮಸಭೆಗಳನ್ನು ಆಯೋಜಿಸಿರುವ ಬಗ್ಗೆ ವರದಿಗಳನ್ನು ಕೆಳಕಂಡ ನಮೂನೆಯಲ್ಲಿ ದಿನಾಂಕ 17.12.2018 ರೊಳಗಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

| ಜಿಲ್ಲೆ | ತಾಲ್ಲೂಕು | ಗ್ರಾಮ ಪಂಚಾಯತಿ | ಭಾಗವಹಿಸಿರುವ ಒಟ್ಟು ಶಾಲೆಗಳು ಮತ್ತು ಮಕ್ಕಳು | ಮಕ್ಕಳು ಚರ್ಚಿಸಿರುವ ಸಮಸ್ಯೆಗಳು | ಗ್ರಾಮ ಪಂಚಾಯತಿ ತೆಗೆದುಕೊಂಡಿರುವ ಕ್ರಮಗಳು |
|---|---|---|---|---|---|

ತಮ್ಮ ನಂಬುಗೆಯ,

11/12

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ